ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಪ್ರಾಥಮಿಕ ಶಾಲೆಗಳು - 48,716
ಶಿಕ್ಷಕರು - 2,09,837

ಆ) ಪ್ರೌಢಶಾಲೆಗಳು - 8248
ಶಿಕ್ಷಕರು - 78,888

ಇ) ಪ್ರಾಥಮಿಕ ಶಾಲೆ - 7299
ಪ್ರೌಢಶಾಲೆ - 2298

ಈ) ಇಲ್ಲ.

ಉ) ಇಲ್ಲ.

ರಾಜ್ಯದ ಶಾಲೆಗಳಲ್ಲಿ ಕಲಿಯುತ್ತಿರುವ ಕ್ರೀಡಾಪಟುಗಳಿಗೆ ಗ್ರೇಸ್‌ಮಾರ್ಕ್ಸ್

1957 (2217) ಶ್ರೀ ಕಟ್ಟಾಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದ ಶಾಲೆಗಳಲ್ಲಿ ಕಲಿಯುತ್ತಿರುವ ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು ಗ್ರೇಸ್‌ಮಾರ್ಕ್ಸ್ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಆ) ಇಲ್ಲದಿದ್ದಲ್ಲಿ, ಈ ಬಗ್ಗೆ ಕೂಡಲೇ ಸರ್ಕಾರ ನಿರ್ಧಾರ ಕೈಗೊಳ್ಳುತ್ತದೆಯೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇದೆ.

ಆ) ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಖಾಲಿ ಇರುವ ಸಹಾಯಕ ದಂತ ಶಸ್ತ್ರ ಚಿಕಿತ್ಸೆ ವೈದ್ಯರುಗಳು

1958 (2218) ಶ್ರೀ ಕಟ್ಟ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಖಾಲಿ ಇರತಕ್ಕ ಸಹಾಯಕ ದಂತ ಶಸ್ತ್ರ ಚಿಕಿತ್ಸೆ ವೈದ್ಯರ ಹುದ್ದೆಗಳೆಷ್ಟು;

ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 159.